# ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಸುನೀಲಗೌಡ ಬಸನಗೌಡ ಪಾಟೀಲ ರವರ ನಿಯಮ 72 ರಡಿಯಲ್ಲಿ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಬಗ್ಗೆ.

**ವಿಷಯ :**

ರಾಜ್ಯದಲ್ಲಿ ಸರ್ಕಾರಿ ಶಾಲೆಗಳು ಮೂಲಭೂತ ಸೌಕರ್ಯಗಳಿಂದ ವಂಚಿತವಾಗಿವೆ ಪ್ರತಿಯೊಂದು ಸರ್ಕಾರಿ ಶಾಲೆಗಳಲ್ಲಿ ಇರಬೇಕಾದ ಮೂಲಭೂತ ಸೌಕರ್ಯಗಳಾದ ಶೌಚಾಲಯ, ಶಾಲಾ ಕೊಠಡಿಗಳು, ಆಟದ ಮೈದಾನ, ಗ್ರಂಥಾಲಯಗಳು, ಪ್ರಯೋಗಾಲಯಗಳು, ಸ್ಮಾರ್ಟ್ ಬೋರ್ಡ್, ಗಣಕಯಂತ್ರ ಕೊಠಡಿಗಳು ಸರ್ಕಾರಿ ಶಾಲೆಗಳಲ್ಲಿ ಇಲ್ಲದಿರುವುದರಿಂದ ಹಾಗೂ ನಮ್ಮ ವಿಜಯಪುರ ಮತ್ತು ಬಾಗಲಕೋಟೆಯ ಸರ್ಕಾರಿ ಶಾಲೆಗಳ ಕಟ್ಟಡಗಳು ಶಿಥಿಲಗೊಂಡು ಅತ್ಯಂತ ಕೆಟ್ಟ ಸ್ಥಿತಿಯಲ್ಲಿವೆ. ಇದರಿಂದಾಗಿ ಮಕ್ಕಳ ಕಲಿಕೆಯ ಮೇಲೆ ಕೆಟ್ಟ ಪರಿಣಾಮ ಬೀರುತ್ತಿದ್ದು, ಕಲಿಕಾ ಮಟ್ಟ ತೀವ್ರವಾಗಿ ಕುಸಿಯುತ್ತಿದೆ. ಇಂಥಹ ಗಂಭೀರ ಸಮಸ್ಯೆಯ ಕುರಿತು ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:**

ಕಳೆದ ಮೂರು ವರ್ಷಗಳಲ್ಲಿ, ರಾಜ್ಯವಲಯ ಮುಂದುವರೆದ ಯೋಜನೆಯಡಿ ರಾಜ್ಯದಾದ್ಯಂತ ಶಿಥಿಲಗೊಂಡಿರುವ ಶಾಲಾ ಕಟ್ಟಡಗಳ ದುರಸ್ಥಿ/ನವೀಕರಣಕ್ಕೆ ಈ ಕೆಳಕಂಡಂತೆ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ.

**ಕೊಠಡಿಗಳ ನಿರ್ಮಾಣ:**

| ವರ್ಷ | ಶಾಲೆಗಳ ಸಂಖ್ಯೆ | ಕೊಠಡಿಗಳ ಸಂಖ್ಯೆ | ಮಂಜೂರಾದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 2018-19 | 1907 | 2963 | 38020.14 |
| 2019-20 | 632 | 973 | 11989.84 |
| 2020-21 | 1007 | 1483 | 18000.00 |
| ಒಟ್ಟು | 3546 | 5419 | 68009.98 |

**ಕೊಠಡಿಗಳ ದುರಸ್ಥಿ:**

| ವರ್ಷ | ಶಾಲೆಗಳ ಸಂಖ್ಯೆ | ಕೊಠಡಿಗಳ ಸಂಖ್ಯೆ | ಮಂಜೂರಾದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 2018-19 | 2697 | 4195 | 4242.44 |
| 2019-20 | 1065 | 5003 | 3681.00 |
| 2020-21 | 187 | 187 | 476.11 |
| ಒಟ್ಟು | 3949 | 9385 | 8399.55 |

ಕಳೆದ ಮೂರು ವರ್ಷಗಳಲ್ಲಿ ರಾಜ್ಯವಲಯ ಮುಂದುವರೆದ ಯೋಜನೆಯಡಿ ವಿಜಯಪುರ ಜಿಲ್ಲೆಗೆ ಸಂಬಂಧಿಸಿದಂತೆ ಈ ಕೆಳಕಂಡಂತೆ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ.

**ಕೊಠಡಿಗಳ ನಿರ್ಮಾಣ:**

| ವರ್ಷ | ಶಾಲೆಗಳ ಸಂಖ್ಯೆ | ಕೊಠಡಿಗಳ ಸಂಖ್ಯೆ | ಮಂಜೂರಾದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 2018–19 | 82 | 141 | 1803.60 |
| 2019–20 | 23 | 35 | 437.95 |
| 2020–21 | 31 | 55 | 690.90 |
| ಒಟ್ಟು | 136 | 231 | 2932.45 |

**ಕೊಠಡಿಗಳ ದುರಸ್ಥಿ:**

| ವರ್ಷ | ಶಾಲೆಗಳ ಸಂಖ್ಯೆ | ಕೊಠಡಿಗಳ ಸಂಖ್ಯೆ | ಮಂಜೂರಾದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 2018–19 | 69 | 76 | 167.77 |
| 2019–20 | 25 | 153 | 93.64 |
| 2020–21 | 9 | 9 | 67.00 |
| ಒಟ್ಟು | 103 | 238 | 328.41 |

ಕಳೆದ ಮೂರು ವರ್ಷಗಳಲ್ಲಿ ರಾಜ್ಯವಲಯ ಮುಂದುವರೆದ ಯೋಜನೆಯಡಿ ಬಾಗಲಕೋಟೆ ಜಿಲ್ಲೆಗೆ ಸಂಬಂಧಿಸಿದಂತೆ ಈ ಕೆಳಕಂಡಂತೆ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ.

**ಕೊಠಡಿಗಳ ನಿರ್ಮಾಣ:**

| ವರ್ಷ | ಶಾಲೆಗಳ ಸಂಖ್ಯೆ | ಕೊಠಡಿಗಳ ಸಂಖ್ಯೆ | ಮಂಜೂರಾದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 2018–19 | 73 | 140 | 1726.05 |
| 2019–20 | 13 | 17 | 226.55 |
| 2020–21 | 29 | 44 | 564.25 |
| ಒಟ್ಟು | 115 | 201 | 2516.85 |

**ಕೊಠಡಿಗಳ ದುರಸ್ಥಿ:**

| ವರ್ಷ | ಶಾಲೆಗಳ ಸಂಖ್ಯೆ | ಕೊಠಡಿಗಳ ಸಂಖ್ಯೆ | ಮಂಜೂರಾದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 2018–19 | 78 | 161 | 123.47 |
| 2019–20 | 31 | 135 | 85.10 |
| 2020–21 | 8 | 8 | 19.00 |
| ಒಟ್ಟು | 117 | 304 | 227.57 |

- 2019-20ನೇ ಸಾಲಿನಲ್ಲಿ ಆರ್.ಐ.ಡಿ.ಎಫ್-25 ಅಡಿಯಲ್ಲಿ ಅಧಿಕ ಮಳೆಯಿಂದ ಹಾನಿಯಾದ 3386 ಸರ್ಕಾರಿ ಶಾಲೆಗಳ 6469 ಕೊಠಡಿಗಳ ಮರು ನಿರ್ಮಾಣಕ್ಕಾಗಿ ರೂ.75807.30 ಲಕ್ಷಗಳ ಅನುದಾನವನ್ನು ಮಂಜೂರು ಮಾಡಿದೆ.
- 2019-20ನೇ ಸಾಲಿನಲ್ಲಿ ಮಳೆಯಿಂದ ಹಾನಿಗೊಳಗಾದ 6196 ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ 13260 ಕೊಠಡಿಗಳ ದುರಸ್ಥಿಗೆ ರೂ.19951.75 ಲಕ್ಷಗಳ ಅನುದಾನದಲ್ಲಿ ಜಿಲ್ಲಾಧಿಕಾರಿಗಳ ಮುಖಾಂತರ ಕ್ರಮ ಕೈಗೊಳ್ಳಲಾಗಿದೆ.
- 2020-21ನೇ ಸಾಲಿನಲ್ಲಿ ಅತಿವೃಷ್ಟಿ/ಪ್ರವಾಹದಿಂದ ಹಾನಿಗೀಡಾದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ತುರ್ತು ದುರಸ್ಥಿಗೆ ರೂ.7557.99 ಲಕ್ಷಗಳ ಅನುದಾನದಲ್ಲಿ ಜಿಲ್ಲಾಧಿಕಾರಿಗಳ ಮುಖಾಂತರ ಕ್ರಮ ಕೈಗೊಳ್ಳಲಾಗಿದೆ.
- 2021-22ನೇ ಸಾಲಿನಲ್ಲಿ ಒಟ್ಟಾರೆಯಾಗಿ ರಾಜ್ಯದಾದ್ಯಂತ ಸರ್ಕಾರಿ ಶಾಲೆಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ರೂ.86217.56 ಲಕ್ಷಗಳ ಅನುದಾನ ಬಿಡುಗಡೆಗೊಳಿಸಲಾಗಿದೆ.
- 2016-17ನೇ ಸಾಲಿನಿಂದ 'ತಂತ್ರಜ್ಞಾನ ಬೆಂಬಲಿತ ಕಲಿಕಾ ಕಾರ್ಯಕ್ರಮ' ಅನುಷ್ಠಾನಗೊಳಿಸಲಾಗುತ್ತಿದ್ದು, ಮಾಹಿತಿ ತಂತ್ರಜ್ಞಾನದ ಉಪಯೋಗಗಳನ್ನು ಶಿಕ್ಷಣ ಕ್ಷೇತ್ರದಲ್ಲಿ ಅಳವಡಿಸಿ, ಶಾಲೆಗಳಲ್ಲಿನ ಬೋಧನಾ ಕಲಿಕಾ ಪ್ರಕ್ರಿಯೆಯ ಗುಣಮಟ್ಟ ಉತ್ತಮಪಡಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ. ಈ ಕಾರ್ಯಕ್ರಮದಡಿ ಶಿಕ್ಷಕರ ಸಾಮರ್ಥ್ಯವೃದ್ಧಿ, ಇ-ಸಂಪನ್ಮೂಲಗಳ ಲಭ್ಯತೆ ಮತ್ತು ಹಾರ್ಡ್‌ವೇರ್‌ಗಳ ಪೂರೈಕೆ ಮಾಡಲಾಗುತ್ತಿದೆ.
- ಇದುವರೆಗೆ ರಾಜ್ಯದ ಸರ್ಕಾರಿ ಪ್ರೌಢಶಾಲೆಗಳ 38632 ಶಿಕ್ಷಕರುಗಳಿಗೆ 10 ದಿನಗಳ ತರಬೇತಿ ನೀಡಿ, ತಮ್ಮ ತರಗತಿ ಬೋಧನೆಯಲ್ಲಿ ಉತ್ತಮ ಬೋಧನಾ ವಿಧಾನಗಳನ್ನು ಅನುಸರಿಸಲು ಅವರನ್ನು ಸಶಕ್ತಗೊಳಿಸಲಾಗಿದೆ. 25000ಕ್ಕೂ ಅಧಿಕ ಇ-ಸಂಪನ್ಮೂಲಗಳನ್ನು ದೀಕ್ಷಾ ಪೋರ್ಟಲ್‌ನಲ್ಲಿ ಅಳವಡಿಸಲಾಗಿದೆ. 4687 ಸರ್ಕಾರಿ ಪ್ರೌಢಶಾಲೆಗಳಿಗೆ ಸ್ಮಾರ್ಟ್ ಕ್ಲಾಸ್ ಸೌಲಭ್ಯ ಒದಗಿಸಲಾಗಿದೆ. 2351 ಸರ್ಕಾರಿ ಪ್ರೌಢಶಾಲೆಗಳಲ್ಲಿ ಕಂಪ್ಯೂಟರ್ ಲ್ಯಾಬ್ ಸ್ಥಾಪಿಸಲಾಗಿದೆ. ಪ್ರಸ್ತುತ ಸಾಲಿನಲ್ಲಿ 170 ಸರ್ಕಾರಿ ಪ್ರೌಢಶಾಲೆಗಳಲ್ಲಿ ಕಂಪ್ಯೂಟರ್ ಲ್ಯಾಬ್ ಸ್ಥಾಪನೆ ಪ್ರಗತಿಯಲ್ಲಿದೆ.
- ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಯ ಎಲ್ಲಾ 339 ಸರ್ಕಾರಿ ಪ್ರೌಢಶಾಲೆಗಳಲ್ಲಿ ಸ್ಮಾರ್ಟ್ ಕ್ಲಾಸ್ ಸೌಲಭ್ಯ ಒದಗಿಸಲಾಗಿದೆ ಮತ್ತು 117 ಸರ್ಕಾರಿ ಪ್ರೌಢಶಾಲೆಗಳಲ್ಲಿ ಕಂಪ್ಯೂಟರ್ ಲ್ಯಾಬ್ ಒದಗಿಸಲಾಗಿದೆ. ಪ್ರಸ್ತುತ ಸಾಲಿನಲ್ಲಿ ಈ ಜಿಲ್ಲೆಗಳ 5 ಸರ್ಕಾರಿ ಪ್ರೌಢಶಾಲೆಗಳಲ್ಲಿ ಕಂಪ್ಯೂಟರ್ ಲ್ಯಾಬ್ ಸ್ಥಾಪನೆ ಕಾರ್ಯ ಪ್ರಗತಿಯಲ್ಲಿದೆ.
- ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆಯಿಂದ ಪ್ರತಿ ವರ್ಷ ಜಿಲ್ಲಾವಾರು ಆಯ್ದ ಶಾಲೆಗಳಿಗೆ ಮೈದಾನಗಳ ಅಭಿವೃದ್ಧಿಗೆ ಅನುದಾನವನ್ನು ನೀಡಲಾಗುತ್ತಿದೆ.
- 2021-22 ನೇ ಸಾಲಿನಿಂದ ಸರ್ಕಾರದ ಗ್ರಾಮೀಣಾಭಿವೃದ್ಧಿ ಇಲಾಖೆಯಿಂದ ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಿಗೆ ಎನ್‌ಆರ್‌ಇಜಿ (ಮಹಾತ್ಮಗಾಂಧಿ ನರೇಗಾ ಯೋಜನೆ) ಯಡಿಯಲ್ಲಿ ಅಡಿಯಲ್ಲಿ ಮೈದಾನಗಳ ಅಭಿವೃದ್ಧಿ ಪಡಿಸುವುದಕ್ಕೆ ಅನುದಾನ ಒದಗಿಸುತ್ತಿದೆ.
- ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿ ಶಾಸನಬದ್ಧ ಅನುದಾನದಲ್ಲಿ ಶೇಕಡ 2 ರಷ್ಟು ಹಣವನ್ನು ಮೀಸಲಿರಿಸಿ ಕ್ರೀಡಾ ಮೈದಾನಗಳ ಅಭಿವೃದ್ಧಿಗೆ ನೀಡಲಾಗುತ್ತಿದೆ ಹಾಗೂ ಪುರಸಭೆ ಹಾಗೂ ನಗರಸಭೆ ಶಾಸನಬದ್ಧ ಅನುದಾನದಲ್ಲಿ ಶೇ.1ರಷ್ಟು ಹಣವನ್ನು ಮೀಸಲಿರಿಸಿ ಕ್ರೀಡಾ ಚಟುವಟಿಕೆಗಳಿಗೆ ನೀಡಲಾಗುತ್ತಿದೆ.

- ಒಟ್ಟಾರೆ ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಆಟದ ಮೈದಾನದ ಅಭಿವೃದ್ಧಿಗೆ ಇನ್ನೂ ಉತ್ತಮವಾದ ರೀತಿಯಲ್ಲಿ ಅನುದಾನ ಬಿಡುಗಡೆ ಮಾಡಿ, ಕ್ರೀಡಾ ಚಟುವಟಿಕೆಗಳ ಅಭ್ಯಾಸಕ್ಕೆ ಅನುಕೂಲ ಮಾಡಲು ಕ್ರಮ ವಹಿಸಿದೆ.

<u>ವಿಜಯಪುರ ಜಿಲ್ಲೆ:</u>

- ವಿಜಯಪುರ ಜಿಲ್ಲೆಗೆ ಸಂಬಂಧಿಸಿದಂತೆ 2021-22ನೇ ಸಾಲಿಗೆ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ರೂ.6.00 ಲಕ್ಷಗಳಂತೆ ಸರ್ಕಾರಿ ಶಾಲೆಗಳ ದುರಸ್ಥಿಗೆ 48.00 ಲಕ್ಷಗಳ ಅನುದಾನ ಬಿಡುಗಡೆಗೊಳಿಸಿದೆ.
- ಸರ್ಕಾರಿ ಶಾಲೆಗಳ ತುರ್ತು ದುರಸ್ಥಿಗಾಗಿ ವಿಜಯಪುರ ಜಿಲ್ಲೆಗೆ ರೂ.25.00 ಲಕ್ಷಗಳ ಅನುದಾನ ಬಿಡುಗಡೆಗೊಳಿಸಿದೆ.
- ಶತಮಾನೋತ್ಸವ ಪೂರೈಸಿದ ಶಾಲೆಗಳ ಅಭಿವೃದ್ಧಿಗಾಗಿ ವಿಜಯಪುರ ಜಿಲ್ಲೆಗೆ ರೂ.49.50 ಲಕ್ಷಗಳ ಅನುದಾನ ಬಿಡುಗಡೆಗೊಳಿಸಿದೆ.
- ಅಮೃತ ಮಹೋತ್ಸವ ಯೋಜನೆಯಡಿ ಸರ್ಕಾರಿ ಶಾಲೆಗಳ ಅಭಿವೃದ್ಧಿಗಾಗಿ ವಿಜಯಪುರ ಜಿಲ್ಲೆಗೆ ಪ್ರತಿ ಶಾಲೆಗೆ ರೂ.10.00 ಲಕ್ಷದಂತೆ 36 ಶಾಲೆಗಳಿಗೆ ರೂ.360.00 ಲಕ್ಷಗಳ ಅನುದಾನ ಬಿಡುಗಡೆಗೊಳಿಸಿದೆ.
- ಎಸ್.ಡಿ.ಪಿ. ಯೋಜನೆಯಡಿ 167 ಶಾಲೆಗಳ ಕೊಠಡಿಗಳ ನಿರ್ಮಾಣಕ್ಕಾಗಿ ವಿಜಯಪುರ ಜಿಲ್ಲೆಗೆ 563.57 ಲಕ್ಷ ಅನುದಾನ ಮಂಜೂರಾಗಿದ್ದು ಕಾಮಗಾರಿಗಳು ಪ್ರಗತಿಯಲ್ಲಿವೆ.
- ಶಿಕ್ಷಣ ಇಲಾಖೆ ಮತ್ತು ನರೇಗಾ ಯೋಜನೆಯಡಿ ವಿಜಯಪುರ ಜಿಲ್ಲೆಗೆ 133.10 ಲಕ್ಷಗಳ ಅನುದಾನ ಮಂಜೂರಾಗಿದ್ದು ಶೌಚಾಲಯ ಮತ್ತು ಕುಡಿಯುವ ನೀರಿನ ಸೌಲಭ್ಯಗಳನ್ನು ಕಲ್ಪಿಸಲುಕ್ರಮ ಕೈಗೊಳ್ಳಲಾಗುತ್ತಿದೆ.

<u>ಬಾಗಲಕೋಟೆ ಜಿಲ್ಲೆ:</u>

- ಬಾಗಲಕೋಟೆ ಜಿಲ್ಲೆಗೆ ಸಂಬಂಧಿಸಿದಂತೆ 2021-22ನೇ ಸಾಲಿಗೆ ರಾಜ್ಯವಲಯ ಮುಂದುವರೆದ ಯೋಜನೆಯಡಿಯಲ್ಲಿ ವಿವಿಧ ವಿಧಾನಸಭಾ ಕ್ಷೇತ್ರಗಳ ಸರ್ಕಾರಿ ಶಾಲೆಗಳ ಕೊಠಡಿಗಳ ದುರಸ್ಥಿಗೆ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ರೂ.6.00 ಲಕ್ಷಗಳಂತೆ ರೂ. 42.00 ಲಕ್ಷ ಅನುದಾನ ಬಿಡುಗಡೆಯಾಗಿರುತ್ತದೆ.
- 2021-22 ನೇ ಸಾಲಿಗೆ ರಾಜ್ಯವಲಯ ಮುಂದುವರೆದ ಯೋಜನೆಯಡಿಯಲ್ಲಿ ಅಮೃತ ಶಾಲಾ ಯೋಜನೆಯಡಿ ಸರ್ಕಾರಿ ಶಾಲೆಗಳ ಮೂಲಭೂತ ಸೌಲಭ್ಯ ಒದಗಿಸಲು ಪ್ರತಿ ಶಾಲೆಗಳಿಗೆ ತಲಾ 10.00 ಲಕ್ಷದಂತೆ ಬಾಗಲಕೋಟೆ ಜಿಲ್ಲೆಗೆ 27 ಶಾಲೆಗಳಿಗೆ ರೂ. 270.00 ಲಕ್ಷಗಳ ಅನುದಾನ ಬಿಡುಗಡೆಯಾಗಿರುತ್ತದೆ.
- ಬಾಗಲಕೋಟೆ ಜಿಲ್ಲೆಯಲ್ಲಿ ಶಾಲೆಗಳಿಗೆ ಅಗತ್ಯವಿರುವ ಆಟದ ಮೈದಾನ ಅಭಿವೃದ್ಧಿಗಾಗಿ ನರೇಗಾ ಯೋಜನೆಯಲ್ಲಿ ಅಳವಡಿಸಿಕೊಂಡು ಅಭಿವೃದ್ಧಿ ಪಡಿಸಲಾಗುತ್ತಿದೆ.
- ಬಾಗಲಕೋಟೆ ಜಿಲ್ಲೆಯಲ್ಲಿ ಎಲ್ಲಾ ಶಾಲೆಗಳು ಗ್ರಂಥಾಲಯ ಪುಸ್ತಕಗಳನ್ನು ಹೊಂದಿರುತ್ತವೆ.
- ಬಾಗಲಕೋಟೆ ಜಿಲ್ಲೆಯಲ್ಲಿ ಸರ್ಕಾರಿ ಪ್ರೌಢ ಶಾಲೆಗಳಲ್ಲಿ "ಅಟಲ್ ಟಿಂಕರಿಂಗ್ " ಯೋಜನೆಯಡಿ ಪ್ರಯೋಗಾಲಯಗಳನ್ನು ಸ್ಥಾಪಿಸಲಾಗುತ್ತಿದೆ.
- ಬಾಗಲಕೋಟೆ ಜಿಲ್ಲೆಯಲ್ಲಿ ಕೆಲವು ಶಾಲೆಗಳಲ್ಲಿ ಪ್ರತ್ಯೇಕ ಗಣಕಯಂತ್ರ ಕೊಠಡಿಗಳನ್ನು ಹೊಂದಿರುತ್ತದೆ. ಗಣಕಯಂತ್ರ ಕೊಠಡಿಗಳನ್ನು ಹೊಂದಿರದೆ ಇರುವ ಶಾಲೆಗಳಲ್ಲಿ ಶಾಲಾ ಕಾರ್ಯಾಲಯದಲ್ಲಿಯೇ ಗಣಕಯಂತ್ರಗಳನ್ನು ಇರಿಸಲಾಗಿದೆ.

* ಬಾಗಲಕೋಟೆ ಜಿಲ್ಲೆಯ 184 ಸರ್ಕಾರಿ ಪ್ರೌಢ ಶಾಲೆಗಳಿಗೆ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ವತಿಯಿಂದ ಸ್ಮಾರ್ಟ್ ಬೋರ್ಡ್‌ಗಳನ್ನು ಕೊಡಲಾಗಿರುತ್ತದೆ.

ಆಯವ್ಯಯದಲ್ಲಿ ಒದಗಿಸಲಾದ ಅನುದಾನದ ಲಭ್ಯತೆ ಹಾಗೂ ಅಗತ್ಯತೆಗೆ ಅನುಗುಣವಾಗಿ ಹಂತಹಂತವಾಗಿ ರಾಜ್ಯದಾದ್ಯಂತ ಎಲ್ಲಾ ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕ್ರಮವಹಿಸಲಾಗುತ್ತಿದೆ.

**ಸಂಖ್ಯೆ : ಇಪಿ 136 ಯೋಸಕ 2022**

(ಬಿ.ಸಿ.ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು